ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಲಾಕ್‌ಡೌನ್ ವೇಳೆಯಲ್ಲಿ ಕಾರ್ಮಿಕ ಇಲಾಖೆಯಿಂದ ಬಿಡುಗಡೆಯಾದ ಆಹಾರ ಕಿಟ್‌ಗಳ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

819 (946) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಲಾಕ್‌ಡೌನ್ ಸಂದರ್ಭದಲ್ಲಿ ಕಾರ್ಮಿಕ ಇಲಾಖೆಯಿಂದ ಪ್ರತಿ ಕುಟುಂಬಗಳಿಗೆ ಬಿಡುಗಡೆಯಾದ ಆಹಾರ ಪೊಟ್ಟಣ ಮತ್ತು ದಿನಸಿ ಕಿಟ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬಿಡುಗಡೆಯಾದ ದಿನಸಿ ಕಿಟ್‌ಗಳಲ್ಲಿ ಯಾವ ಯಾವ ಪದಾರ್ಥಗಳು ಇದ್ದವು ಪ್ರತಿ ಕಿಟ್‌ಗಳ ಮೌಲ್ಯ ಎಷ್ಟು ;

(ಇ) ಕಾರ್ಮಿಕ ಇಲಾಖೆಯಿಂದ ಬಿಡುಗಡೆಯಾದ ದಿನಸಿ ಕಿಟ್‌ಗಳನ್ನು ಅಕ್ರಮವಾಗಿ ಸಂಗ್ರಹಿಸಿ ಅದರ ಮೇಲೆ ಇದ್ದ ಸರ್ಕಾರಿ ಲೇಬಲ್ ತೆಗೆದು ಆಡಳಿತ ಪಕ್ಷದ ನಾಯಕರುಗಳ ಭಾವಚಿತ್ರ ಅಂಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಈ ಕುರಿತು ದೂರು ಕೊಟ್ಟು ಎಫ್.ಐ.ಆರ್ ಆದರೂ ಸಹ ಈ ತನಕ ಯಾವುದೇ ಕ್ರಮ ಕೈಗೊಂಡಿಲ್ಲದಿರುವುದಕ್ಕೆ ಕಾರಣ ಏನು? (ವಿವರ ನೀಡುವುದು)